# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 365 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21.12.2022 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆ, ಮದ್ದೂರು ತಾಲೂಕು, ಸೋಮಹಳ್ಳಿ ಗ್ರಾಮದ ಸರ್ವೆ ನಂ.29 ರಲ್ಲಿನ 3 ಎಕರೆ 16 ಗುಂಟೆ ಸರ್ಕಾರಿ ಜಮೀನನ್ನು ಕೈಗಾರಿಕಾ ಉದ್ದೇಶಕ್ಕೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಭೂಸ್ವಾಧೀನಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಂಡ್ಯ ಜಿಲ್ಲೆ, ಮದ್ದೂರು ತಾಲೂಕು, ಸೋಮನಹಳ್ಳಿ ಗ್ರಾಮದ ಸರ್ವೆ ನಂ.29 ರಲ್ಲಿನ 3 ಎಕರೆ 16 ಗುಂಟೆ ಸರ್ಕಾರಿ ಜಮೀನನ್ನು ಕೈಗಾರಿಕಾ ಉದ್ದೇಶಕ್ಕೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗಾಗಿ ಜಿಲ್ಲಾಧಿಕಾರಿ, ಮಂಡ್ಯ ಇವರ ಅಧಿಕೃತ ಜ್ಞಾಪನ ಸಂಖ್ಯೆ:ಎಲ್.ಎನ್.ಡಿ(1)ಸಿಆರ್: 6/99-2000 ದಿನಾಂಕ: 24.11.2000 ರಂತೆ ಭೂಸ್ವಾಧೀನ ಪಡಿಸಿಕೊಳ್ಳಲಾಗಿರುತ್ತದೆ. |
| (ಆ) | ಭೂ ಸ್ವಾಧೀನ ಸಂಬಂಧ ಕಂದಾಯ ಇಲಾಖೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಹಣ ಪಾವತಿಸಲಾಗಿದೆಯೇ; | ಹೌದು. |
| (ಇ) | ಹಾಗಿದ್ದಲ್ಲಿ, ಇದುವರೆವಿಗೂ ಕಂದಾಯ ಇಲಾಖೆಯಿಂದ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ಸದರಿ ಜಮೀನನ್ನು ಹಸ್ತಾಂತರಿಸದಿರಲು ಕಾರಣಗಳೇನು; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ 2000 ರಲ್ಲಿ ಮಂಜೂರು ಮಾಡಲಾಗಿದ್ದು, 4 ವರ್ಷಗಳ ನಂತರ ಸರ್ಕಾರಕ್ಕೆ ಜಮೀನಿನ ಮೌಲ್ಯವನ್ನು ಪಾವತಿಸಿರುತ್ತಾರೆ. ಮಂಡ್ಯ ಜಿಲ್ಲೆ, ಮದ್ದೂರು ತಾಲೂಕು, ಸೋಮಹಳ್ಳಿ ಗ್ರಾಮದ ಸರ್ವೆ ನಂ.29 ರಲ್ಲಿ ಗೋಮಾಳ ವಿಸ್ತೀರ್ಣ ಒಟ್ಟು 76-05 ಎಕರೆ ಇದ್ದು, ಈ ಪೈಕಿ ದರಖಾಸ್ತು ಮೂಲಕ ಮಂಜೂರಾಗಿರುವ ಜಮೀನು ಹಾಗೂ ಈಗಾಗಲೇ ಕೆ.ಎ.ಐ.ಡಿ.ಬಿ.ಗೆ ಮಂಜೂರು ಮಾಡಿರುವ ವಿಸ್ತೀರ್ಣವನ್ನು ಕಳೆದು ಉಳಿಕೆ 36-10 ಎಕರೆ ಜಮೀನು ಇದ್ದು, ಸದರಿ ಜಮೀನಿನ ಅಳತೆ ಮಾಡಿಸಿ ಹದ್ದುಬಸ್ತು ನಿಗದಿಪಡಿಸಿ ಹಸ್ತಾಂತರಿಸಬೇಕಾಗಿರುತ್ತದೆ. |
| (ಈ) | ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಹಸ್ತಾಂತರಿಸಲಾಗುವುದು? | ಶೀಘ್ರದಲ್ಲಿಯೇ ಹಸ್ತಾಂತರಿಸಲಾಗುವುದು. |

(ಕಡತ ಸಂಖ್ಯೆ:ಕಂಇ 47 ಎಲ್‌ಜಿವ್ಯೆ 2022)

(ಆರ್.ಅಶೋಕ)
ಕಂದಾಯ ಸಚಿವರು